**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಕೊಪ್ಪ**

**ಸಿ. ಸಿ. ನಂ.870/2023**

ಪಿರ್ಯಾಧಿದಾರರುಃ ಶ್ರೀ ಗಣೇಶ ಸಿ., ಬಿನ್ ಚಂದ್ರುಶೇಖರ, 25 ವರ್ಷ, ಕಾರ್ಯನಿರ್ವಹಣಾ ಅಧಿಕಾರಿ, ಮಲೆನಾಡು ಶಿಕ್ಷಕ ವಿವಿದ್ದೋದ್ದೇಶ ಸೌಹಾರ್ದ ಸಹಕಾರ ನಿಯಮಿತ (ರಿ), ಸಂಗೀತ ಕಾಂಪ್ಲೆಕ್ಸ್ ತಿಲಕ್ ರಸ್ತೆ, ಕೊಪ್ಪ ಅಂಚೆ ಮತ್ತು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

**-ವಿರುದ್ಧ -**

ಆರೋಪಿಃ ಶ್ರೀ ಚಂದ್ರುಶೇಖರ ಎಂ. ಬಿನ್ ಮಹೇಶ್ವರಪ್ಪ ಆರ್., 53 ವರ್ಷ, ವ್ಯಾಪಾರಿ, ವಾಸ ಅಶೋಕರಾವ್ ರಸ್ತೆ, ಬಾಳಗಡಿ, ಬಿಂತ್ರುವಳ್ಳಿ ಗ್ರಾಮ, ಕೊಪ್ಪ ಅಂಚೆ ಮತ್ತು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

**ಆರೋಪಣೆ**

ಆರೋಪಿಯಾದ ನೀವು ನಿಮ್ಮ ತುರ್ತು ಅವಶ್ಯಕತೆಗಾಗಿ ದಿನಾಂಕ 06.05.2019 ರಂದು ರೂ. 3,00,000/- ಗಳ ಸಾಲವನ್ನು ಪಿರ್ಯಾದಿದಾರರ ಸಂಸ್ಥೆಯಿಂದ ಪಡೆದುಕೊಂಡಿದ್ದು, ನಂತರ ಪಿರ್ಯಾದಿದಾರರು ಪದೇ ಪದೇ ಕೇಳಿದಾಗ ಸದರಿ ಬಾಕಿ ಹಣದ ಮರುಪಾವತಿಗಾಗಿ ನೀವು ನಿಮ್ಮ ಬಾಬ್ತು ಅವರಿಗೆ ರೂ. 5,29,500/- ಚೆಕ್ ನಂ. 419236, ದಿನಾಂಕ 27.07.2023 ನ್ನು ನಮೂದಿಸಿದ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಕೊಪ್ಪ ಶಾಖೆಯ ಒಂದು ಚೆಕ್ಕನ್ನು ನೀಡಿದ್ದು, ಅವರು ಸದರಿ ಚೆಕ್ಕನ್ನು ಸಿ.ಡಿ.ಸಿ.ಸಿ. ಕೊಪ್ಪ ಶಾಖೆಗೆ ಹಾಜರುಪಸಿದಾಗ ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ ಎಂಬ ಹಿಂಬರಹದೊಂದಿಗೆ ನೀವು ಕೊಟ್ಟಂತ ಚೆಕ್ ವಾಪಸ್ಸಾಗಿದ್ದು ಸದರಿ ಚೆಕ್ ಅಮಾನ್ಯಗೊಂಡ ಬಗ್ಗೆ ನಿಮ್ಮ ಗಮನಕ್ಕೆ ದಿನಾಂಕ 01.09.2023 ರಂತೆ ವಕೀಲರ ನೋಟೀಸು ನೀಡಿದ್ದು, ಸದರಿ ನೋಟೀಸು ದಿನಾಂಕ 04.09.2023 ರಂದು ನಿಮಗೆ ಜಾರಿಯಾಗಿದ್ದೂ ಸಹ ನೀವು ಚೆಕ್ ಬಾಬ್ತು ಹಣವನ್ನು ನೀಡದೇ ವರ್ಗಾವಣೀಯ ಲಿಖಿತ ಅಧಿನಿಯಮ ಕಲಂ 138 ರ ಅಡಿಯಲ್ಲಿ ಅಪರಾಧವನ್ನು ನನ್ನ ಸಂಜ್ಞೆಯಲ್ಲಿ ಎಸಗಿರುತ್ತೀರಿ.

ಪ್ರಶ್ನೆ 1ಃ- ನಿಮಗೆ ಓದಿ ಹೇಳಿದ ಆರೋಪಣೆ ಅರ್ಥವಾಯಿತೇ?
ಉತ್ತರಃ **ತಿಳಿಯಿತು**.
ಪ್ರಶ್ನೆ 2ಃ- ಮೇಲಿನ ಆಪಾಧನೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ **ವಿಚಾರಣೆಯಾಗಬೇಕು**.

ಮೇಲಿನ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಸ್ವತಃ ನಾನೇ ಬರೆದುಕೊಂಡಿರುವುದು ನಿಜವೆಂದು ದೃಡೀಕರಿಸುತ್ತೇನೆ.

ದಿನಾಂಕಃ 02.07.2025

**ಸಹಿ/- 02.07.2025.**
(ಎಂ.ಎನ್. ನಂದಿನಿ)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ಕೊಪ್ಪ